# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s Gamesa Renewable Private Limited ಕಂಪನಿಗೆ ಗದಗ ಮತ್ತು ಧಾರವಾಡ ಜಿಲ್ಲೆಗಳ, ಗದಗ ಮತ್ತು ನವಲಗುಂದ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Koppal Renewable Private Limited ಕಂಪನಿಗೆ ವರ್ಗಾವಣೆ ಮಾಡಿ, ತದನಂತರ 30 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 100 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಇಎನ್ 109 ಎನ್‌ಸಿಇ 2016, ದಿನಾಂಕ: 22.07.2016
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಏಕ ಕಡತ ಸಂಖ್ಯೆ : KREDL/08/KRPL-100MW(GRPL-100MW/Hombal/Gadag &Dharwad/2017/1529-K.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ M/s Gamesa Renewable Private Limited ಕಂಪನಿಗೆ ಗದಗ ಮತ್ತು ಧಾರವಾಡ ಜಿಲ್ಲೆಗಳ, ಗದಗ ಮತ್ತು ನವಲಗುಂದ ತಾಲ್ಲೂಕುಗಳ ಹೊಂಬಾಲ್, ಲಿಂಗದಾಲ್ ಮತ್ತು ವೆಂಕಟಾಪುರ ಗ್ರಾಮಗಳಲ್ಲಿ 30 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು

ಮೇಲೆ ಓದಲಾದ ಕ್ರಮ ಸಂಖ್ಯೆ:(2) ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಏಕ ಕಡತ ಪದ್ಧತಿಯಡಿಯಲ್ಲಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Gamesa Renewable Private Limited ಕಂಪನಿ ಗದಗ ಮತ್ತು ಧಾರವಾಡ ಜಿಲ್ಲೆಗಳ, ಗದಗ ಮತ್ತು ನವಲಗುಂದ ತಾಲ್ಲೂಕುಗಳ ಹೊಂಬಾಲ್, ಲಿಂಗದಾಲ್ ಮತ್ತು ವೆಂಕಟಾಪುರ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Koppal Renewable Private Limited ಕಂಪನಿಗೆ ವರ್ಗಾವಣೆ ಮಾಡಿ, ತದನಂತರ 30 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 100 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಅಭಿವೃದ್ಧಿದಾರರು ಮನವಿ ಮಾಡಿರುತ್ತಾರೆ. ಸದರಿ ವರ್ಗಾವಣೆ ಮತ್ತು ಸಾಮರ್ಥ್ಯವನ್ನು ವೃದ್ಧಿಸುವುದಕ್ಕೆ ಎರಡೂ ಕಂಪನಿಗಳು ಸಹಮತಿ ನೀಡಿದ್ದು, M/s Gamesa Renewable Private Limited ಕಂಪನಿಯವರು M/s Koppal Renewable Private Limited ಕಂಪನಿಯು 100 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ Corporate Guarantee ಯನ್ನು ಛಾಪ ಕಾಗದದ ಮೂಲಕ ನೀಡಿರುತ್ತಾರೆ. ಸದರಿ ವರ್ಗಾವಣೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ, ಇನ್ನಿತರೆ ವಿವರಗಳನ್ನು ಸಲ್ಲಿಸಿರುತ್ತಾರೆ. M/s Gamesa Renewable Private Limited ಕಂಪನಿ ಗದಗ ಮತ್ತು ಧಾರವಾಡ ಜಿಲ್ಲೆಗಳ, ಗದಗ ಮತ್ತು ನವಲಗುಂದ ತಾಲ್ಲೂಕುಗಳ ಹೊಂಬಾಲ್, ಲಿಂಗದಾಲ್ ಮತ್ತು ವೆಂಕಟಾಪುರ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Koppal Renewable Private Limited ಕಂಪನಿಗೆ ವರ್ಗಾವಣೆ ಮಾಡಿ, ತದನಂತರ 30 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 100 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

....2

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಎನ್ 214 ಎನ್‌ಸಿಇ 2017,**
**ಬೆಂಗಳೂರು, ದಿನಾಂಕ: 09.05.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಸರ್ಕಾರದ ಆದೇಶ ಸಂಖ್ಯೆ: ಇಎನ್ 109 ಎನ್‌ಸಿಇ 2016, ದಿನಾಂಕ: 22.07.2016 ರಲ್ಲಿ M/s Gamesa Renewable Private Limited ಕಂಪನಿಗೆ ಗದಗ ಮತ್ತು ಧಾರವಾಡ ಜಿಲ್ಲೆಗಳ, ಗದಗ ಮತ್ತು ನವಲಗುಂದ ತಾಲ್ಲೂಕುಗಳ ಹೊಂಬಾಲ್, ಲಿಂಗದಾಲ್ ಮತ್ತು ವೆಂಕಟಾಪುರ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Koppal Renewable Private Limited ಕಂಪನಿಗೆ ವರ್ಗಾವಣೆ ಮಾಡಿ, ತದನಂತರ 30 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 100 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹೆಚ್ಚಿಸಿ ಆದೇಶಿಸಲಾಗಿದೆ.

## Schedule

**Geographical area description for 100 MW capacity wind power project**

| Sl. No. | Toposheet No. | Near by villages of the proposed area and district. | Geographical area description of the project | Sanctioned capacity in MW | Enhancement proposed in MW | Total capacity in MW |
|---|---|---|---|---|---|---|
| 1 | 48 M/10 | Hombal, Lingadal Venkatapura, Shelawadi, Tuppadaku, Rahatti, Balaganur, Belahod Villages of Gadag & Navalgunda Taluks, Gadag and Dharwad districts. | The identified area is situated in plain land near Gadag district The identified area is surrounded by points A, B, C, D and are held in the following Geographical co-ordinates as:<br><br>Point A:Lat:15°30'0"N, Long: 75°30'00"E<br>Point B:Lat:15°35'0"N, Long: 75°30'0"E<br>Point C:Lat:15°35'0"N, Long: 75°36'12.96"E<br>Point D:Lat:15°30'0"N, Long:75°34'15.02"E<br><br>Peaks: 629, 603, 612 and 613 m AMSL. | 30 MW (15 Nos x 2000 kW) | 70 MW (35 Nos x 2000 kW) | 100 MW (50 Nos x 2000 Kw) |
| **Total** | | | | | | **100 MW** |

**ಷರತ್ತು ಮತ್ತು ನಿಬಂಧನೆಗಳು**

1. M/s Koppal Renewable Private Limited ರವರು ಸರ್ಕಾರಿ ಆದೇಶ ಸಂಖ್ಯೆ: ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. M/s Koppal Renewable Private Limited ರವರು ಸದರಿ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 109 ಎನ್‌ಸಿಇ 2016, ದಿನಾಂಕ: 22.07.2016 ರಲ್ಲಿ ನಿಗಧಿಪಡಿಸಿರುವ ಕಾಲಾವಧಿಯಂತೆ ಅನುಷ್ಠಾನಗೊಳಿಸತಕ್ಕದ್ದು.

.....3

3 M/s Koppal Renewable Private Limited ರವರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು / ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಆಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು / ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.

4 M/s Koppal Renewable Private Limited ರವರು ಯೋಜನೆಗೆ ಸಂಬಂಧಿಸಿದಂತೆ ನಿಯಮಾನುಸಾರ ಪಾವತಿಸಬೇಕಾಗಿರುವ ಎಲ್ಲಾ ತರಹದ ಶುಲ್ಕಗಳನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

5 ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

6 ಈ ಯೋಜನೆಗೆ ಸರ್ಕಾರದ ಕೈಗಾರಿಕಾ ನೀತಿ 2014–19 ರನ್ವಯ ಅನ್ವಯಿಸುವ ಸವಲತ್ತುಗಳು ಅನ್ವಯವಾಗುತ್ತವೆ.

7 ಈ ಆದೇಶವನ್ನು ರದ್ದುಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ: ಇಎನ್ 109 ಎನ್‌ಸಿಇ 2016, ದಿನಾಂಕ: 22.07.2016 ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
09.05

**ಇವರಿಗೆ :**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

**ಪ್ರತಿ:**

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

.....4

5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.

8 ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಹೆಸ್ಕಾಂ/ಜೆಸ್ಕಾಂ/ಮೆಸ್ಕಾಂ/ಸೆಸ್ಕ್ /ಹೆಸ್ಕಾಂ.

9 ಜಿಲ್ಲಾಧಿಕಾರಿ, ಗದಗ ಜಿಲ್ಲೆ / ಧಾರವಾಡ ಜಿಲ್ಲೆ, ಗದಗ / ಧಾರವಾಡ.

10 ಉಪ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಮತ್ತು ಧಾರವಾಡ ಪ್ರಾದೇಶಿಕ ವಿಭಾಗ, ಗದಗ ಮತ್ತು ಧಾರವಾಡ.

11 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

12 M/s Gamesa Renewable Private Limited., No. 24, Saraogi Mansion, 2nd Cross, Nehru Nagar, Sheshadripuram, Banglaroe-560 020.

13 M/s Koppal Renewable Private Limited

14 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

15 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

16 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.